ನ.72 (98)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ, ಇವರು ನಿಯಮ 72ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಉತ್ತರ**

**ಪ್ರಶ್ನೆ**

ಬೆಂಗಳೂರು ಮತ್ತು ಮೈಸೂರು ವಿಭಾಗದ ಸರ್ಕಾರಿ ಪ್ರೌಢ ಶಾಲೆಗಳಲ್ಲಿನ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರಿಗೆ ಬಡ್ತಿ ನೀಡುವಾಗ ಬಹಳ ವರ್ಷಗಳಿಂದ ತಾರತಮ್ಯ ಉಂಟಾಗಿರುತ್ತದೆ. ಪ್ರಸ್ತುತ ಇಲಾಖಾ ನಿಯಮಗಳಲ್ಲಿ ಮುಂಬಡ್ತಿಗೆ ಇರುವ ಶೇಕಡ 75 ರಷ್ಟು ಹಾಗೂ ನೇರ ನೇಮಕಾತಿಗೆ ಮೀಸಲಿರುವ ಶೇಕಡ 25ರಷ್ಟು ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಆದರೆ ನಿಯಮಕ್ಕೆ ವ್ಯತಿರಿಕ್ತವಾಗಿ ಶೇಕಡ 25ಕ್ಕಿಂತ ಹೆಚ್ಚು ಹುದ್ದೆಗಳನ್ನು ಆಕ್ರಮಿಸಿಕೊಂಡಿರುತ್ತಾರೆ. ಇದರಿಂದ ಶೇಕಡ 75ರಷ್ಟು ಬಡ್ತಿ ಪಡೆಯಬೇಕಾದ ಸಹ ಶಿಕ್ಷಕರಿಗೆ ಅನ್ಯಾಯವಾಗಿ ಸೇವಾವಧಿಯಲ್ಲಿ ಒಂದು ಬಡ್ತಿ ಪಡೆಯದೆ ನಿವೃತ್ತರಾಗುತ್ತಿದ್ದಾರೆ. ಆದ್ದರಿಂದ ಪ್ರೌಢಶಾಲಾ ಸಹ ಶಿಕ್ಷಕರಿಗೆ ಬಡ್ತಿಯಲ್ಲಿ ಅನ್ಯಾಯವಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ**

4. ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 51 ಡಿಜಿಓ 2005, ದಿನಾಂಕ:30/10/2006ರಂತೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ ಆದೇಶ ಹೊರಡಿಸಲಾಗಿದ್ದು, ಕರ್ನಾಟಕ ಶಿಕ್ಷಣ ಇಲಾಖೆಯ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು-2006 ಜಾರಿಗೆ ಬಂದಿರುತ್ತದೆ. ಅದರಂತೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಶೇಕಡಾ. 25ರಷ್ಟು ಮತ್ತು ಮುಂಬಡ್ತಿ ಮೂಲಕ ಶೇಕಡಾ 75ರಷ್ಟು ಅನುಪಾತದಲ್ಲಿ ಭರ್ತಿ ಮಾಡುವ ಸಂಬಂಧ ಆದೇಶಿಸಲಾಗಿರುತ್ತದೆ.

5. ಮೇಲ್ಕಂಡ ಸರ್ಕಾರದ ಅಧಿಸೂಚನೆಯಂತೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಶೇಕಡ. 25ರಷ್ಟು ಮತ್ತು ಮುಂಬಡ್ತಿ ಮೂಲಕ ಶೇಕಡಾ. 75ರಷ್ಟು ಅನುಪಾತದಲ್ಲಿ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

6. ದಿನಾಂಕ:30/10/2006 ರಿಂದ ನಂತರದಲ್ಲಿ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳನ್ನು ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿರುವುದರಿಂದ, ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪ ಉಂಟಾಗಿರುವುದಿಲ್ಲ.

ಇಪಿ 39 ಎಸ್‌ಓಹೆಚ್ 2021

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು